ಒಂದು ತಾಂತ್ರಿಕ ಸೇವಾ ಕೇಂದ್ರವಿದ್ದು ಈ ತಾಂತ್ರಿಕ ಸೇವಾ ಕೇಂದ್ರದ ಅಧಿಕಾರಿಯ ಹುದ್ದೆಯನ್ನು ಉನ್ನತೀಕರಿಸಿ ಅನೇಕರಿಗೆ ಸ್ಥಳಾಂತರಿಸಲಾಗಿದೆ. ಉಳಿದ ಸಿಬ್ಬಂದಿಯಲ್ಲಿ ಕನಿಷ್ಠ ಸಿಬ್ಬಂದಿಯನ್ನು ಹೊರತುಪಡಿಸಿ ಉಳಿದ ಸಿಬ್ಬಂದಿಯನ್ನು ಹೊಸದಾಗಿ ಸೃಜನೆಯಾಗಿರುವ ರೇಷ್ಮೆ ಸಹಾಯಕ ನಿರ್ದೇಶಕರ ಕಛೇರಿಗೆ ಸ್ಥಳಾಂತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಹುಬ್ಬಳ್ಳಿ-ಧಾರವಾಡ ನಗರಪಾಲಿಕೆಯ ಪೌರಕಾರ್ಮಿಕರಿಗೆ ಗೃಹ ಮತ್ತು ನಿವೇಶನದ ಕೊರತೆ.

2660 (3032) ಶ್ರೀ ಜಬ್ಬಾರ್ ಖಾನ್ ಹೆಚ್. ಹೊನ್ನಳ್ಳಿ (ಹುಬ್ಬಳ್ಳಿ) :— ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಹುಬ್ಬಳ್ಳಿ-ಧಾರವಾಡ ನಗರಪಾಲಿಕೆಯ ಪೌರಕಾರ್ಮಿಕರ ಗೃಹ ಮತ್ತು ನಿವೇಶನಗಳ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಎಷ್ಟು ಮನೆಗಳನ್ನು ಕಟ್ಟಲು ಸರ್ಕಾರ ಅನುಮತಿ ನೀಡಿದೆ.?

ಇ) ಮನೆಗಳಿಲ್ಲದ ಪೌರ ಕಾರ್ಮಿಕರ ಸಂಖ್ಯೆ ಎಷ್ಟು? (ವಿವರ ನೀಡುವುದು)

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :—

ಅ) ಹೌದು.

ಆ) ಒಟ್ಟು 200 ಮನೆಗಳನ್ನು ಕಟ್ಟುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಒಟ್ಟು 768.

ಮಹಾನಗರಪಾಲಿಕೆಯಲ್ಲಿ 1092 ಪೌರ ಕಾರ್ಮಿಕರು ಕೆಲಸ ನಿರ್ವಹಿಸುತ್ತಿದ್ದು ಅವರಲ್ಲಿ 324 ಪೌರಕಾರ್ಮಿಕರಿಗೆ ಮನೆಗಳನ್ನು ನೀಡಲಾಗಿದೆ. ಉಳಿದ 768 ಪೌರಕಾರ್ಮಿಕರಿಗೆ ಮನೆಗಳನ್ನು ನೀಡಬೇಕಾಗಿದೆ.

ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದಿಂದ ಹಂಚಲಾದ ನಿವೇಶನಗಳ ಸಂಖ್ಯೆ

2661 (3033) ಶ್ರೀ ಜಬ್ಬಾರ್ ಖಾನ್ ಹೈಯತ್ ಖಾನ್ ಹೊನ್ನಳ್ಳಿ (ಹುಬ್ಬಳ್ಳಿ) :— ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದಿಂದ 1999 ರಿಂದ 2001ನೇ ಸಾಲಿನವರೆಗೆ ಎಷ್ಟು ನಿವೇಶನಗಳನ್ನು ಹಂಚಲಾಗಿದೆ.